**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01.**

ಸಂಖ್ಯೆ: ಸಿ1(8)ಇತರೆ.ಸುತ್ತೋಲೆ.117/2012-13 ದಿನಾಂಕ: 11.02.2013

**ಸುತ್ತೋಲೆ**

ವಿಷಯ: ದಿನಾಂಕ: 20.02.2013 ರಂದು ನಡೆಯುವ ಶೈಕ್ಷಣಿಕ ಸಮಾವೇಶಕ್ಕೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧಿಕಾರಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಟಿಪ್ಪಣಿ ಸಂಖ್ಯೆ: ಪ್ರಾ.ಪ್ರೌ.ಶಿ.ಸ/ 502/ 2013, ದಿನಾಂಕ: 11.02.2013.

***********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಕಳೆದ 5 ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವಿವಿಧ ಯೋಜನೆ ಮತ್ತು ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಗಿರುವ ಪ್ರಗತಿಯನ್ನು ಮತ್ತು ಯಶೋಗಾಥೆಗಳನ್ನು ಶಿಕ್ಷಣ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರಲು ಹಾಗೂ ಉತ್ತಮ ಪ್ರಯತ್ನಗಳನ್ನು ಎಲ್ಲ ಕಡೆ ಅನುಷ್ಠಾನಗೊಳಿಸಲು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಅಪರ ಆಯುಕ್ತರು, ಗುಲ್ಬರ್ಗಾ ಮತ್ತು ಧಾರವಾಡ, ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ವೃಂದದ ಅಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹನಿರ್ದೇಶಕರ ವೃಂದದ ಅಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ವೃಂದದ ಅಧಿಕಾರಿಗಳು ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳನ್ನೊಳಗೊಂಡ ಶೈಕ್ಷಣಿಕ ಸಮಾವೇಶವನ್ನು ದಿನಾಂಕ: 20.02.2013 ರ ಬುಧವಾರದಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಶಿಕ್ಷಕರ ಸದನದಲ್ಲಿ ಏರ್ಪಡಿಸಲಾಗಿದೆ. ಆದ್ದರಿಂದ ಈ ಸಮಾವೇಶದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಈ ಕೆಳಗಿನ ಅಧಿಕಾರಿಗಳು ತಪ್ಪದೇ ಭಾಗವಹಿಸಲು ತಿಳಿಸಿದೆ.

1. ಅಪರ ಆಯುಕ್ತರು, ಗುಲ್ಬರ್ಗಾ ಮತ್ತು ಧಾರವಾಡ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ವೃಂದದ ಅಧಿಕಾರಿಗಳು.
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹನಿರ್ದೇಶಕರ ವೃಂದದ ಅಧಿಕಾರಿಗಳು.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ವೃಂದದ ಅಧಿಕಾರಿಗಳು (ಡಯಟ್, ಸಿಟಿಇ ಒಳಗೊಂಡಂತೆ).
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳು (ಡಿ.ವೈ.ಪಿ.ಸಿ)

**ಈ ಕಾರ್ಯಕ್ರಮದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಮಾನ್ಯ ಶಿಕ್ಷಣ ಸಚಿವರು ಭಾಗವಹಿಸಲಿದ್ದಾರೆ. ಪ್ರಯುಕ್ತ ಬೆಳಿಗ್ಗೆ 10.00 ಯೊಳಗೆ ಎಲ್ಲಾ ಅಧಿಕಾರಿಗಳು ಸಭೆಗೆ ಹಾಜರಾಗವಂತೆ ಸೂಚಿಸಿದೆ.**

ಈ ಶೈಕ್ಷಣಿಕ ಸಮಾವೇಶಕ್ಕೆ **"ಕಳೆದ 5 ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವಿವಿಧ ಯೋಜನೆ ಮತ್ತು ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಗಿರುವ ಉತ್ತಮ ಪ್ರಯತ್ನ ಮತ್ತು ಯಶೋಗಾಥೆಗಳ"** ಬಗ್ಗೆ ಫೋಟೋ ಸಹಿತ ವರದಿಯನ್ನು ದಿನಾಂಕ: 16.02.2013 ರೊಳಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ

ಉಪನಿರ್ದೇಶಕರು(ಆಡಳಿತ) ರವರು ಎರಡು ಲೇಖನಗಳನ್ನು, ಪ್ರಾಂಶುಪಾಲರು, ಡಯಟ್, ರವರು ಎರಡು ಲೇಖನಗಳನ್ನು, ಮತ್ತು ಪ್ರಾಂಶುಪಾಲರು, ಸಿಟಿಇ, ಗುಲ್ಬರ್ಗಾ, ಬೆಳಗಾವಿ, ಮೈಸೂರು ಮತ್ತು ಜಮಖಂಡಿ ರವರು ತಲಾ ಎರಡು ಲೇಖನಗಳನ್ನು, ಖುದ್ದಾಗಿ ಶಿಕ್ಷಣ ವಾರ್ತೆ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸಲ್ಲಿಸಲು ತಿಳಿಸಿದೆ. ಲೇಖನಗಳನ್ನು ನುಡಿ ಅಕ್ಷರ-1 ಫಾಂಟ್‌ನಲ್ಲಿ ಸಾಫ್ಟ್ ಕಾಪಿ, ಹಾರ್ಡ್ ಕಾಪಿ ಮತ್ತು ಫೋಟೋಗಳೊಂದಿಗೆ ಖುದ್ದಾಗಿ ಸಲ್ಲಿಸುವುದು.

ಇ-ಮೇಲ್ ವಿಳಾಸ: **gvinuta@gmail.com,**
**shivannagk@gmail.com**

(ಎಸ್.ಆರ್.ಉಮಾಶಂಕರ್)
ಆಯುಕ್ತರು

ಇವರಿಗೆ:

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ ಸಲ್ಲಿಸುತ್ತ ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.
4. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಹೊಸಕೆರೆಹಳ್ಳಿ, ಬೆಂಗಳೂರು.
5. ನಿರ್ದೇಶಕರು, ಪರೀಕ್ಷೆಗಳು ಹಾಗೂ ಇತರೆ ಪರೀಕ್ಷೆಗಳು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
6. ನಿರ್ದೇಶಕರು, ಸಿಸಿಲಿಪ್, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ.
8. ರಾಜ್ಯದ ಎಲ್ಲಾ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ.
9. ರಾಜ್ಯದ ಎಲ್ಲಾ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ/ಪ್ರಾಂಶುಪಾಲರು, ಸಿಟಿಇ.
10. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು/ ಡಯಟ್ ಪ್ರಾಂಶುಪಾಲರು.
11. ರಾಜ್ಯದ ಎಲ್ಲಾ ಶಿಕ್ಷಣಾಧಿಕಾರಿಗಳಿಗೆ.
12. ಕಛೇರಿ ಪ್ರತಿ.